**ಜೊಹಾನ್ಸ್‌ಬರ್ಗ್‌ನಲ್ಲಿ G20 ಶೃಂಗಸಭೆಯ ನೇಪಥ್ಯದಲ್ಲಿ ಕೆನಡಾ ಪ್ರಧಾನಮಂತ್ರಿಯನ್ನು ಭೇಟಿ ಮಾಡಿದ ಪ್ರಧಾನಮಂತ್ರಿ (ನವೆಂಬರ್ 23, 2025)**

ನವೆಂಬರ್ 23, 2025

ಭಾರತ-ಕೆನಡಾ ಪಾಲುದಾರಿಕೆಯ ಪ್ರಗತಿಯನ್ನು ಪರಿಶೀಲಿಸಲು ಜೊಹಾನ್ಸ್‌ಬರ್ಗ್‌ನಲ್ಲಿ G20 ನಾಯಕರ ಶೃಂಗಸಭೆಯ ನೇಪಥ್ಯದಲ್ಲಿ ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಕೆನಡಾ ಪ್ರಧಾನಿ ಶ್ರೀ ಮಾರ್ಕ್ ಕಾರ್ನಿ ಅವರನ್ನು ಭೇಟಿಯಾದರು.

2. ನಿರ್ಣಾಯಕ ತಂತ್ರಜ್ಞಾನಗಳು, ಪರಮಾಣು ಶಕ್ತಿ, ಪೂರೈಕೆ ಸರಪಳಿಗಳ ವೈವಿಧ್ಯೀಕರಣ ಮತ್ತು AI ಕ್ಷೇತ್ರಗಳಲ್ಲಿ ತ್ರಿಪಕ್ಷೀಯ ಸಹಕಾರಕ್ಕೆ ಉತ್ತೇಜನ ನೀಡುವ ಆಸ್ಟ್ರೇಲಿಯಾ-ಕೆನಡಾ-ಭಾರತ ತಂತ್ರಜ್ಞಾನ ಮತ್ತು ನಾವೀನ್ಯತೆ (ACITI) ಪಾಲುದಾರಿಕೆಯನ್ನು ನಾಯಕರು ಸ್ವಾಗತಿಸಿದರು. ಕನನಾಸ್ಕಿಸ್‌ನಲ್ಲಿ 2025 ಜೂನ್‌ನಲ್ಲಿ ನಡೆದ G7 ಶೃಂಗಸಭೆಯ ನೇಪಥ್ಯದಲ್ಲಿ ಅವರು ನಡೆಸಿದ ಸಭೆಯಿಂದೀಚೆಗೆ ಮತ್ತು 2025 ಅಕ್ಟೋಬರ್‌ನಲ್ಲಿ ವಿದೇಶಾಂಗ ಸಚಿವರು ದ್ವಿಪಕ್ಷೀಯ ತೊಡಗುವಿಕೆಗಾಗಿ ಹೊಸ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದ ನಂತರ ಸಂಬಂಧಗಳಲ್ಲಾಗಿರುವ ನವೀಕರಿಸಿದ ಚೈತನ್ಯವನ್ನು ಅವರು ಪ್ರಶಂಸಿಸಿದರು. ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ, ಶಿಕ್ಷಣ, ಬಾಹ್ಯಾಕಾಶ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಇಂಧನ ಕ್ಷೇತ್ರಗಳಲ್ಲಿನ ಸಹಕಾರದ ಬಗ್ಗೆ ಇಬ್ಬರೂ ಪ್ರಧಾನಿಗಳು ಚರ್ಚಿಸಿದರು. 2026 ಫೆಬ್ರವರಿಯಲ್ಲಿ ಭಾರತವು ಆಯೋಜಿಸಲಿರುವ AI ಶೃಂಗಸಭೆಗೆ ಪ್ರಧಾನಮಂತ್ರಿ ಕಾರ್ನಿ ಬೆಂಬಲವನ್ನು ವ್ಯಕ್ತಪಡಿಸಿದರು.

3. 2030 ರ ಒಳಗೆ ದ್ವಿಪಕ್ಷೀಯ ವ್ಯಾಪಾರವನ್ನು USD 50 ಬಿಲಿಯನ್‌ಗೆ ದ್ವಿಗುಣಗೊಳಿಸುವ ಗುರಿಯನ್ನು ಹೊಂದಿರುವ ಉನ್ನತ-ಮಹತ್ವಾಕಾಂಕ್ಷೆಯ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ (CEPA) ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ನಾಯಕರು ಒಪ್ಪಿಕೊಂಡರು. ಎರಡೂ ಕಡೆಯವರು ತಮ್ಮ ದೀರ್ಘಕಾಲದ ನಾಗರಿಕ ಪರಮಾಣು ಸಹಕಾರವನ್ನು ಪುನರುಚ್ಚರಿಸಿದರು ಮತ್ತು ದೀರ್ಘಾವಧಿಯ ಯುರೇನಿಯಂ ಪೂರೈಕೆ ವ್ಯವಸ್ಥೆಗಳ ಮೂಲಕ ಸೇರಿದಂತೆ ಸಹಯೋಗವನ್ನು ವಿಸ್ತರಿಸುವ ಬಗ್ಗೆ ಚಾಲ್ತಿಯಲ್ಲಿರುವ ಚರ್ಚೆಗಳನ್ನು ಗಮನಿಸಿದರು.

4. ನಿಯಮಿತ ಉನ್ನತ ಮಟ್ಟದ ವಿನಿಮಯಗಳ ಪ್ರಾಮುಖ್ಯತೆಯನ್ನು ನಾಯಕರು ಒತ್ತಿ ಹೇಳಿದರು. ಪ್ರಧಾನಿ ಮೋದಿ ಅವರು ಭಾರತಕ್ಕೆ ಭೇಟಿ ನೀಡುವಂತೆ ಪ್ರಧಾನಮಂತ್ರಿ ಕಾರ್ನಿ ಅವರನ್ನು ಆಹ್ವಾನಿಸಿದರು.

ಜೊಹಾನ್ಸ್‌ಬರ್ಗ್

ನವೆಂಬರ್ 23, 2025